ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH


## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:     ದಿನಾಂಕ : DATE : 10/6/20

# ಎಚ್.ಕೆ.ಪಾಟೀಲ್, ಸ್ಪೀಕರ್ ಕಾಗೇರಿ ನಡುವೆ ಸಂಘರ್ಷ ಮುಂದುವರಿಕೆ

**ಬೆಂಗಳೂರು:** ಸಾರ್ವಜನಿಕ ಲೆಕ್ಕಪತ್ರ ಸಮಿತಿ(ಪಿಎಸಿ) ಅಧ್ಯಕ್ಷ ಎಚ್.ಕೆ.ಪಾಟೀಲ್ ಬರೆದ ಪತ್ರಕ್ಕೆ ಸ್ಪೀಕರ್ ಸ್ಪಂದಿಸದಿರುವ ಹಿನ್ನೆಲೆಯಲ್ಲಿ ಸಮಿತಿ ಸಭೆಯಲ್ಲಿ ಈ ಬಗ್ಗೆ ಗಂಭೀರ ಚರ್ಚೆಯಾಗಿದೆ. ಜತೆಗೆ ಕೋವಿಡ್ ನಿಯಂತ್ರಣ ಸಂಬಂಧದ ಉಪಕರಣ ಖರೀದಿಯಲ್ಲಿ ನಡೆದಿದೆ ಎನ್ನಲಾದ ಅಕ್ರಮದ ಕುರಿತು ಬಂದಿರುವ ದೂರು ಹಾಗೂ ಪುರಾವೆ ಸಹಿತ ಸ್ಪೀಕರ್ ಅವರಿಗೆ ಮತ್ತೊಂದು ಪತ್ರ ಬರೆಯಲು ನಿರ್ಧರಿಸಲಾಗಿದೆ.

ಸ್ಥಳ ಪರಿಶೀಲನೆ ನಡೆಸಲು ಪಿಎಸಿ ಅಧ್ಯಕ್ಷ ಎಚ್.ಕೆ.ಪಾಟೀಲ್ ಬಯಸಿದ್ದಕ್ಕೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ತಡೆ ನೀಡಿದ್ದರು. ಹೀಗಾಗಿ ಪಾಟೀಲ್, ಸಭಾಧ್ಯಕ್ಷರ ವಿರುದ್ಧವೇ ಹಕ್ಕುಚ್ಯುತಿ ಮಂಡಿಸುವುದಾಗಿ ಹೇಳಿದ್ದರು. ಇದಕ್ಕೆ ಜೂನ್ 2ರ ಸಮಿತಿ ಬಿಜೆಪಿ ಶಾಸಕರು, ''ರಾಜಕೀಯ ದುರುದ್ದೇಶದಿಂದ ಈ ಬಗ್ಗೆ ಮಾಧ್ಯಮಕ್ಕೆ ಹೇಳಿಕೆ ನೀಡಿದ್ದೀರಿ. ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡಿಸುವ ನಿಮ್ಮ ವಿರುದ್ಧವೇ ಹಕ್ಕುಚ್ಯುತಿ ಮಂಡಿಸಬೇಕಾಗುತ್ತದೆ,'' ಎಂದು ಆಕ್ಷೇಪಿಸಿದ್ದರೆಂದು ಹೇಳಲಾಗಿತ್ತು.

ಬಳಿಕ ಸ್ಪೀಕರ್ ಭೇಟಿಯಾಗಿ ಈ ಬಗ್ಗೆ ಚರ್ಚಿಸಬೇಕು ಎಂಬ ನಿಲುವಿಗೆ ಬರಲಾಗಿತ್ತು. ಇದರ ಬೆನ್ನಿಗೇ ಭೇಟಿಗೆ ಸಮಯ ಕೋರಿ ಸ್ಪೀಕರ್ ಅವರಿಗೆ ಪತ್ರ ಬರೆಯಲಾಗಿತ್ತು. ಇದಕ್ಕೆ ಅವರ ಕಡೆಯಿಂದ ಪ್ರತಿಕ್ರಿಯೆ ಬಾರದಿರುವುದರಿಂದ ಮಂಗಳವಾರ ನಡೆದ ಸಭೆಯಲ್ಲಿ ಸಮಿತಿ ಅಧ್ಯಕ್ಷ ಪಾಟೀಲ್ ಗಮನ ಸೆಳೆದರು. ಪಾಟೀಲ್ ಅವರಿಗೆ ಕಾಂಗ್ರೆಸ್ ಸದಸ್ಯರು ಬೆಂಬಲಿಸಿದರೆ ಬಿಜೆಪಿ ಸದಸ್ಯರು ಸ್ಪೀಕರ್ ಪರ ವಹಿಸಿದರು.